**All India Radio: Bangalore**
**Regional Bulletin In Kannada**
**22.04.2026 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ದೇಶದ ಅಭಿವೃದ್ಧಿಗೆ ಯುವಶಕ್ತಿಯೇ ಭದ್ರ ಬುನಾದಿ ; ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಉಪರಾಷ್ಟ್ರಪತಿ ಅಭಿಮತ

೨. ನಾಳೆ ವೃತ್ತಿಪರ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆ ; ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅಗತ್ಯ ಸಿದ್ಧತೆ

೩. ಪರಪ್ಪನ ಅಗ್ರಹಾರ ಜೈಲಿನೊಳಗೆ ಇದ್ದು, ದೇಶದಲ್ಲಿ ವಿಧ್ವಂಸಕ ಕೃತ್ಯಕ್ಕೆ ಸಂಚು ; ಆರೋಪಿಗಳಿಗೆ ಏಳು ವರ್ಷ ಜೈಲು

೪. ಬೆಂಗಳೂರಿನ ವಿವಿಧೆಡೆ ಜಿಬಿಎ ಮುಖ್ಯ ಆಯುಕ್ತರಿಂದ ಪರಿಶೀಲನೆ ; ಮಳೆಗಾಲದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗದಂತೆ ಕ್ರಮ ಕೈಗೊಳ್ಳಲು ಸೂಚನೆ

೫. ಮುಂದಿನ ಒಂದು ವಾರ ರಾಜ್ಯದ ಹಲವು ಜಿಲ್ಲೆಗಳಲ್ಲಿ ಉಷ್ಣಾಂಶ ಏರಿಕೆ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ

****************

ಪದವಿ ಪಡೆದ ವಿದ್ಯಾರ್ಥಿಗಳು ಸಮಾಜಕ್ಕೆ ಉತ್ತಮ ಕೊಡುಗೆ ನೀಡುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದ್ದಾರೆ.

ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ೧೦ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಭಾರತ ಇಂದು ವಿಶ್ವದಲ್ಲಿ ರಾರಾಜಿಸಲು ಯುವಶಕ್ತಿಯೇ ಕಾರಣ ಎಂದು ಅಭಿಪ್ರಾಯಪಟ್ಟಿದ್ದಾರೆ.

ಪದವೀಧರರು ದೊಡ್ಡ ಕನಸು ಕಾಣಲು ಹಾಗೂ ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಲು ವಿಕಸಿತ ಭಾರತ ಹಾಗೂ ಆತ್ಮ ನಿರ್ಭರ ಭಾರತದ ನಿರ್ಮಾಣಕ್ಕೆ ಕೊಡುಗೆ ನೀಡುವಂತೆ ತಿಳಿಸಿದ್ದಾರೆ.

ಧ್ವನಿ: ಉಪರಾಷ್ಟ್ರಪತಿ

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊಫೆಸರ್ ಸತ್ಯನಾರಾಯಣ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

****************

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುತ್ತಿರುವ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆ ನಾಳೆ ರಾಜ್ಯಾದ್ಯಂತ ನಡೆಯಲಿದೆ.

ಇಂದು ಗಡಿ ಭಾಗ ಮತ್ತು ಇತರ ರಾಜ್ಯಗಳ ಅಭ್ಯರ್ಥಿಗಳು ರಾಜ್ಯದ ೫ ಕೇಂದ್ರಗಳಲ್ಲಿ ಕನ್ನಡ ಭಾಷಾ ಪರೀಕ್ಷೆ ಬರೆದಿದ್ದಾರೆ. ನಾಳೆ ಭೌತಶಾಸ್ತ್ರ ಹಾಗೂ ರಾಸಾಯನಶಾಸ್ತ್ರ, ನಾಡಿದ್ದು ಜೀವಶಾಸ್ತ್ರ ಮತ್ತು ಗಣಿತ ಪರೀಕ್ಷೆ ನಡೆಯಲಿದೆ.

ಈ ಬಾರಿ ಒಟ್ಟು ೩ ಲಕ್ಷದ ೩೦ ಸಾವಿರ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾರ್ಥಿಗಳಿಗೆ ಹೊಸ ವಸ್ತ್ರ ಸಂಹಿತೆಯನ್ನು ಜಾರಿಗೆ ತರಲಾಗಿದೆ. ವಿದ್ಯಾರ್ಥಿಗಳು ನಿಗದಿತ ನಿಯಮಾವಳಿಗಳ ಪ್ರಕಾರವೇ ಉಡುಗೆ ಧರಿಸಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವಂತೆ ಪರೀಕ್ಷಾ ಪ್ರಾಧಿಕಾರ ನಿರ್ದೇಶನ ನೀಡಿದೆ.

ಇಂಜಿನಿಯರಿಂಗ್, ಕೃಷಿ ವಿಜ್ಞಾನ, ಪಶು ವೈದ್ಯಕೀಯ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ರಾಜ್ಯಾದ್ಯಂತ ಪರೀಕ್ಷೆ ನಡೆಯುತ್ತಿದೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ನೇಮಕಾತಿ

ಪರೀಕ್ಷೆಗಳ ಮಾದರಿಯಲ್ಲೇ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ರಾಜ್ಯದ ಎಲ್ಲಾ ೭೪೫ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಪರೀಕ್ಷಾ ನಿರ್ವಹಣೆಗಾಗಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಲು ಎಲ್ಲಾ ಕೇಂದ್ರಗಳಲ್ಲಿ ವಿಶೇಷ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಬೆಂಗಳೂರು, ಉತ್ತರಕನ್ನಡ, ಹಾವೇರಿ, ದಕ್ಷಿಣ ಕನ್ನಡ, ಉಡುಪಿ, ಸೇರಿದಂತೆ ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದೆ.

****************

ದೇಶದ ವಿವಿಧೆಡೆ ವಿಧ್ವಂಸಕ ಕೃತ್ಯ ಎಸಗಲು ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲಿಯೇ ಸಂಚು ರೂಪಿಸಿದ್ದ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿದ್ದ ಟಿ.ನಸೀರ್ ಸೇರಿದಂತೆ ಏಳು ಆರೋಪಿಗಳಿಗೆ ಎನ್‌ಐಎ ನ್ಯಾಯಾಲಯ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ.

೪೮ ಸಾವಿರ ರೂಪಾಯಿ ತಂಡವನ್ನು ನ್ಯಾಯಾಲಯ ವಿಧಿಸಿದೆ. ಆರೋಪಿಗಳು ಬೆಂಗಳೂರು ನಗರದಲ್ಲಿ ಭಯೋತ್ಪಾದಕ ದಾಳಿ ನಡೆಸಲು ಯೋಜನೆ ರೂಪಿಸಿದ್ದರು.

ಈ ಸಂಚಿನಲ್ಲಿ ಜೈಲಿನಲ್ಲಿರುವ ಯುವಕರನ್ನು ಗುರುತಿಸಿ ಭಯೋತ್ಪಾದನೆಯತ್ತ ಆಕರ್ಷಿಸಿ ಭಾರತದಲ್ಲಿ ವಿಧ್ವಂಸಕ ಕೃತ್ಯಗಳನ್ನು ನಡೆಸಲು ಆರೋಪಿಗಳು ಯೋಜಿಸಿದ್ದರು. ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ವಿಶೇಷ ರಾಷ್ಟ್ರೀಯ ತನಿಖಾ ಸಂಸ್ಥೆ  ಕೈಗೆತ್ತಿಕೊಂಡಿದ್ದು, ಎನ್‌ಐಎ ಸಲ್ಲಿಸಿದ್ದ ಆರೋಪಗಳನ್ನು ಆರೋಪಿಗಳು ಒಪ್ಪಿಕೊಂಡಿದ್ದರು.

****************

ಬೆಂಗಳೂರಿನ ಸಾಯಿಲೇಔಟ್ ಪ್ರದೇಶದಲ್ಲಿ ಮಳೆಗಾಲದ ವೇಳೆ ಪ್ರವಾಹ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿವಿಧ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕಸದ ಸಮಸ್ಯೆಗಳ ನಿವಾರಣೆಗೆ ಸಂಬಂಧಿಸಿದಂತೆ ಬೆಂಗಳೂರಿನ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸಾಯಿಲೇಔಟ್ ಪ್ರದೇಶದಲ್ಲಿ ಬಾಕ್ಸ್ ಪುಶಿಂಗ್ ಕಾರ್ಯವನ್ನು ಇದೇ ೩೦ರೊಳಗೆ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ.

****************

ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕ್ಷಮೆಯಾಚಿಸುವಂತೆ ರಾಜ್ಯ ಬಿಜೆಪಿ ಘಟಕ ಒತ್ತಾಯಿಸಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಪ್ರಧಾನಿ ಮೋದಿಯವರು ಅತಿಹೆಚ್ಚು ಕಾಲ ಸೇವೆ ಸಲ್ಲಿಸಿದ್ದು, ಖರ್ಗೆ ಅವರ ಹೇಳಿಕೆ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ತಮಿಳುನಾಡು ಹಾಗೂ ಕೇರಳದಲ್ಲಿ ಕಾಂಗ್ರೆಸ್ ಸೋಲು ಅನುಭವಿಸುವ ಭೀತಿಯಿಂದ ಗಮನ ಬೇರೆಡೆ ಸೆಳೆಯಲು ಪ್ರಧಾನಿ ಮೋದಿಯವರನ್ನು ಅವಮಾನಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

****************

ಮಹಿಳಾ ಮೀಸಲಾತಿ ಎಂಬ ಮಹತ್ವದ ವಿಷಯದಲ್ಲಿ ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳು, ತೋರಿಸಿರುವ ನಿರ್ಲಕ್ಷ್ಯ ಮತ್ತು ದ್ವಂದ್ವ ನಿಲುವು ದೇಶದ ಮಹಿಳೆಯರಿಗೆ ಮಾಡಿದ ಅವಮಾನ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ಅಭಿಪ್ರಾಯಪಟ್ಟಿದ್ದಾರೆ.

ರಾಮನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ಸಮಾನ ಅವಕಾಶಗಳನ್ನು ಒದಗಿಸುವುದು ಕೇವಲ ಚುನಾವಣಾ ಘೋಷಣೆಗಳಲ್ಲದೇ, ಅದು ಸಾಮಾಜಿಕ ನ್ಯಾಯದ ಮೂಲಭೂತ ಅಂಶವಾಗಿರಬೇಕು ಎಂದು ತಿಳಿಸಿದ್ದಾರೆ.

****************

ತುಮಕೂರು ತಾಲ್ಲೂಕಿನ ಊರ್ಡಿಗೆರೆ ಹೋಬಳಿ ಬೊಮ್ಮನಹಳ್ಳಿ, ಕೋಳಿಹಳ್ಳಿ ಹಾಗೂ ಗೂಳೂರು ಹೋಬಳಿ ಬೈರಸಂದ್ರ ಮತ್ತು ಹುಲ್ಲೇನಹಳ್ಳಿ ಗ್ರಾಮದ ಸಮೀಪ ೩೦ಕ್ಕೂ ಹೆಚ್ಚು ನವಿಲುಗಳು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ.

ಅರಣ್ಯ ಇಲಾಖೆ ವನ್ಯಜೀವಿ ಅಪರಾಧ ಪ್ರಕರಣ ದಾಖಲಿಸಿದ್ದು, ಸಾವನ್ನಪ್ಪಿದ ನವಿಲುಗಳ ಅಂಗಾಂಗ ಹಾಗೂ ನೀರಿನ ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ನೇತೃತ್ವದಲ್ಲಿ ತನಿಖಾ ತಂಡ ರಚಿಸಲಾಗಿದ್ದು, ತನಿಖೆ ನಡೆಸಲಾಗುತ್ತಿದೆ.

****************

ಉತ್ತರ ಒಳನಾಡು ಜಿಲ್ಲೆಗಳ ಹಲವು ಕಡೆ ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳ ಕೆಲವೆಡೆ ಇಂದು ಮಳೆಯಾಗಿದೆ.

ಇಂದು ಕಲಬುರಗಿಯಲ್ಲಿ ೪೦ ಡಿಗ್ರಿ, ಮಂಗಳೂರು ೩೫, ಬೆಂಗಳೂರಿನಲ್ಲಿ ೩೬ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ರಾಜ್ಯದ ಹಲವು ಕಡೆ ಇಂದು ಗುಡುಗು ಮಿಂಚು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಜಿಲ್ಲೆಗಳಲ್ಲಿ ಮುಂದಿನ ಒಂದು ವಾರಗಳ ಕಾಲ ೩೫ರಿಂದ ೩೭ ಡಿಗ್ರಿ ಉಷ್ಣಾಂಶ ದಾಖಲಾಗುವ ಸಾಧ್ಯತೆ ಇದೆ. ಬೀದರ್, ವಿಜಯಪುರ, ಬಾಗಲಕೋಟೆ ಸೇರಿದಂತೆ ಉತ್ತರಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮುಂದಿನ ಒಂದು ವಾರದೊಳಗೆ ಗರಿಷ್ಠ ತಾಪಮಾನ ೪೧ ರಿಂದ ೪೩ರವರೆಗೆ ಇರುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

****************

ರಾಜ್ಯಾದ್ಯಂತ ದಿನದಿಂದ ದಿನಕ್ಕೆ ತಾಪಮಾನ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ಮೈಸೂರಿನ ಪ್ರತಿಷ್ಠಿತ ಕೆ.ಆರ್.ಆಸ್ಪತ್ರೆ  ಮುಂಜಾಗ್ರತಾ ಕ್ರಮ ಕೈಗೊಂಡಿದೆ. ಬಿಸಿಲಿನ ಬೇಗೆಯಿಂದ ಅಸ್ವಸ್ಥರಾಗುವವರಿಗೆ ತಕ್ಷಣದ ಚಿಕಿತ್ಸೆ ನೀಡಲು ಆಸ್ಪತ್ರೆಯಲ್ಲಿ ಪ್ರತ್ಯೇಕ ಸನ್ ಸ್ಟ್ರೋಕ್ ವಾರ್ಡ್ ತೆರೆಯಲಾಗಿದೆ ಎಂದು ಆಸ್ಪತ್ರೆ ಅಧೀಕ್ಷಕಿ ಡಾ. ಶೋಭಾ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಬಿಸಿಲಿನ ತಾಪಕ್ಕೆ ತುತ್ತಾದವರಿಗೆ ಒಟ್ಟು ೩೦ ಬೆಡ್‌ಗಳನ್ನು ಮೀಸಲಿಡಲಾಗಿದ್ದು, ತುರ್ತು ಚಿಕಿತ್ಸೆಗೆ ಅಗತ್ಯವಿರುವ ಎಲ್ಲಾ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

****************

ದಾವಣಗೆರೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿರುವ ಗ್ರಾಮಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಜಿಲ್ಲಾಡಳಿತ ಮುಂದಾಗಿದೆ. ಪ್ರಸ್ತುತ ಜಿಲ್ಲೆಯ ೧೩ ಗ್ರಾಮಗಳಿಗೆ ಕೊಳವೆ ಬಾವಿ ಹಾಗೂ ೨ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ನೀರಿನ ಅಭಾವ ಎದುರಾಗಬಹುದಾದ ಸಂಭವನೀಯ ಗ್ರಾಮಗಳನ್ನು ಈಗಲೇ ಗುರುತಿಸಬೇಕು ಎಂದು ಸೂಚಿಸಿದ್ದಾರೆ.  ಸಾರ್ವಜನಿಕರ ದೂರುಗಳಿಗಾಗಿ ಜಿಲ್ಲಾ ಕೇಂದ್ರದಲ್ಲಿ ಪ್ರತ್ಯೇಕ ಸಹಾಯವಾಣಿ ತೆರೆಯಲಾಗಿದ್ದು, ಸಾರ್ವಜನಿಕರು ಕರೆ ಮಾಡಿ ನೀರಿನ ಸಮಸ್ಯೆ ಬಗ್ಗೆ ಮಾಹಿತಿ ನೀಡಬಹುದು ಎಂದು ಅವರು ತಿಳಿಸಿದ್ದಾರೆ.

*******ಮುಕ್ತಾಯ********